**All India Radio: Bangalore**
**National Bulletin In Kannada**
**24.12.2025 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**24.12.2025 1.10 p.m.**

**<><><><>**

ಮುಖ್ಯಾಂಶಗಳು

1. ಇಸ್ರೋದಿಂದ ಅತಿಹೆಚ್ಚು ತೂಕದ ಬ್ಲೂಬರ್ಡ್ ೬ ಸಂವಹನ ಉಪಗ್ರಹ ಯಶಸ್ವಿ ಉಡಾವಣೆ- ಗಣ್ಯರಿಂದ ಅಭಿನಂದನೆ
2. ಯುವಶಕ್ತಿಯಿಂದ ಭಾರತದ ಬಾಹ್ಯಾಕಾಶ ಕ್ಷೇತ್ರಕ್ಕೆ ಹೊಸ ವೇಗ: ಪ್ರಧಾನಿ ನರೇಂದ್ರ ಮೋದಿ ಶ್ಲಾಘನೆ
3. ಉತ್ತರ ಪ್ರದೇಶಕ್ಕೆ ನಾಳೆ ಪ್ರಧಾನಿ ನರೇಂದ್ರ ಮೋದಿ ಭೇಟಿ; ಲಕ್ನೋದಲ್ಲಿ ರಾಷ್ಟ್ರ ಪ್ರೇರಣಾ ಸ್ಥಳ ಉದ್ಘಾಟನೆ
4. ವಿಕಸಿತ ಭಾರತ, ಜಿ ರಾಮ್ ಜಿ ಯೋಜನೆಯಡಿ ಕೇಂದ್ರದ ಕೊಡುಗೆ ೯೫ ಸಾವಿರ ಕೋಟಿ ರೂಪಾಯಿಗಳಿಗೆ ಹೆಚ್ಚಳ- ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್

<><><><>

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ-ಇಸ್ರೋ ಇಂದು ಅತಿಹೆಚ್ಚು ತೂಕದ ಬ್ಲೂಬರ್ಡ್ ೬ ಎಂಬ ಸಂವಹನ ಉಪಗ್ರಹವನ್ನು ಯಶಸ್ವಿಯಾಗಿ ಉಡಾವಣೆ ಮಾಡಿದೆ. ಶ್ರೀಹರಿಕೋಟಾದ ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದಿಂದ ಇಂದು ಬೆಳಗ್ಗೆ ೮ ಗಂಟೆ ೫೫ ನಿಮಿಷಕ್ಕೆ ಎಲ್‌ವಿಎಂ೩-ಎಂ೬ ಮೂಲಕ ಉಪಗ್ರಹ ಉಡಾವಣೆಯಾಯಿತು. ಸುಮಾರು ೧೫ ನಿಮಿಷಗಳ ಹಾರಾಟದ ನಂತರ ಬ್ಲೂಬರ್ಡ್ ಬ್ಲಾಕ್-೨ ಬಾಹ್ಯಾಕಾಶ ನೌಕೆ, ಉಡವಣಾ ವಾಹನದಿಂದ ಬೇರ್ಪಟ್ಟು ಯಶಸ್ವಿಯಾಗಿ ಉದ್ದೇಶಿತ ಕಕ್ಷೆಗೆ ಸೇರಿತು ಈ ಉಪಗ್ರಹವು ಭೂಮಿಯ ಕೆಳ ಕಕ್ಷೆ ತಲುಪಿದ ಅತಿದೊಡ್ಡ ವಾಣಿಜ್ಯ ಸಂವಹನ ಉಪಗ್ರಹವಾಗಿದೆ. ಯಶಸ್ವಿ ಉಡಾವಣೆ ನಂತರ ಮಾತನಾಡಿದ ಇಸ್ರೋ ಅಧ್ಯಕ್ಷ ವಿ.ನಾರಾಯಣನ್, ಭಾರತೀಯ ಲಾಂಚರ್ ಬಳಸಿ, ಭಾರತೀಯ ಮಣ್ಣಿನಿಂದ ಉಡಾವಣೆ ಮಾಡಲಾದ ಅತೀ ಭಾರವಾದ ಉಪಗ್ರಹ ಇದಾಗಿದೆ. ಅದನ್ನು ಉದ್ದೇಶಿತ ಕಕ್ಷೆಗೆ ನಿಖರವಾಗಿ ಸೇರಿಸಿರುವುದು ಇಸ್ರೋಗೆ ಒಂದು ಮಹತ್ವದ ಸಾಧನೆಯಾಗಿದೆ ಎಂದು ಬಣ್ಣಿಸಿದರು.

ಈ ಕಾರ್ಯಾಚರಣೆಯು, ಭಾರತದ ಅತ್ಯಂತ ಶಕ್ತಿಶಾಲಿ ಉಡಾವಣಾ ವಾಹನವಾದ ಎಲ್‌ವಿಎಂ-೩ ಯ ಆರನೇ ಕಾರ್ಯಾಚರಣೆಯ ಹಾರಾಟವಾಗಿದೆ. ಕಕ್ಷೆ ಸೇರಿದ ಉಪಗ್ರಹವನ್ನು ಅಮೆರಿಕಾ ಎಎಸ್‌ಟಿ ಸ್ಪೇಸ್‌ಮೊಬೈಲ್ ಸಂಸ್ಥೆ ಅಭಿವೃದ್ಧಿಪಡಿಸಿದೆ. ಇದನ್ನು ಬಾಹ್ಯಾಕಾಶದಿಂದ ನೇರ ಮೊಬೈಲ್ ಬ್ರಾಡ್‌ಬ್ಯಾಂಡ್ ಸಂಪರ್ಕವನ್ನು ಒದಗಿಸಲು ವಿನ್ಯಾಸಗೊಳಿಸಲಾಗಿದೆ. ಈ ಉಪಗ್ರಹವು ಪ್ರಮಾಣಿತ ಸ್ಮಾರ್ಟ್‌ಫೋನ್‌ಗಳಲ್ಲಿ ೪ಜಿ ಮತ್ತು ೫ಜಿ ಸೇವೆಗಳನ್ನು ಬೆಂಬಲಿಸುವ ಗುರಿಯನ್ನು ಹೊಂದಿದೆ. ಇದು ದೂರದ ಮತ್ತು ಕಡಿಮೆ ಸೇವೆ ಇರುವ ಪ್ರದೇಶಗಳಲ್ಲಿ ವಿಶೇಷವಾಗಿ ಉಪಯುಕ್ತವಾಗಿರುತ್ತದೆ. ಈ ಕಾರ್ಯಾಚರಣೆಯು ಸಾರ್ವಜನಿಕ ಸಂಪರ್ಕವನ್ನು ಸುಧಾರಿಸಲು, ತುರ್ತು ಸಂದರ್ಭಗಳಲ್ಲಿ ಸಂವಹನವನ್ನು ಬೆಂಬಲಿಸಲು ಮತ್ತು ಬಾಹ್ಯಾಕಾಶ ಆಧಾರಿತ ತಂತ್ರಜ್ಞಾನದ ಮೂಲಕ ಜಾಗತಿಕ ಡಿಜಿಟಲ್ ಪ್ರವೇಶವನ್ನು ವಿಸ್ತರಿಸಲು ಸಹಾಯ ಮಾಡುತ್ತದೆ.

<><><><>

ಭಾರತದ ಎಲ್‌ವಿಎಂ೩-ಎಂ೬ ಮೂಲಕ ಅಮೆರಿಕದ ಉಪಗ್ರಹವನ್ನು ಯಶಸ್ವಿಯಾಗಿ ಉದ್ದೇಶಿತ ಕಕ್ಷೆಗೆ ಸೇರಿಸಿದ್ದಕ್ಕಾಗಿ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ, ಕೇಂದ್ರ ಸಚಿವ ಜಿತೇಂದ್ರ ಸಿಂಗ್, ಇಸ್ರೋದ ತಂಡವನ್ನು ಅಭಿನಂದಿಸಿದ್ದಾರೆ.

<><><><>

ಭಾರತದ ಯುವಶಕ್ತಿಯ ಬೆಂಬಲದೊಂದಿಗೆ ದೇಶದ ಬಾಹ್ಯಾಕಾಶ ಕಾರ್ಯಕ್ರಮವು ಹೆಚ್ಚು ಸುಧಾರಿತ ಮತ್ತು ಪ್ರಭಾವಶಾಲಿಯಾಗಿ ಬೆಳೆಯುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಸಂತಸ ವ್ಯಕ್ತಪಡಿಸಿದ್ದಾರೆ. ಆಂಧ್ರಪ್ರದೇಶದ ಶ್ರೀಹರಿಕೋಟಾದಿಂದ ಎಲ್.ವಿ.ಎಂ.೩-ಎಂ೬ ರಾಕೆಟ್ ಮೂಲಕ ಅಮೆರಿಕದ 'ಬ್ಲೂಬರ್ಡ್ ೬' ಉಪಗ್ರಹವನ್ನು ಯಶಸ್ವಿಯಾಗಿ ಉಡಾವಣೆ ಮಾಡಿದ ಹಿನ್ನೆಲೆಯಲ್ಲಿ ವಿಜ್ಞಾನಿಗಳನ್ನು ಅಭಿನಂದಿಸಿರುವ ಪ್ರಧಾನಿ, ಈ ಸಾಧನೆಯು ಭವಿಷ್ಯದ 'ಗಗನಯಾನ'ದಂತಹ ಮಹತ್ವಾಕಾಂಕ್ಷೆಯ ಯೋಜನೆಗಳಿಗೆ ಭದ್ರ ಬುನಾದಿ ಹಾಕಿದೆ ಎಂದು ಹೇಳಿದ್ದಾರೆ. ಈ ಉಡಾವಣೆಯು, ಭಾರತದ ಭಾರೀ ತೂಕದ ರಾಕೆಟ್‌ಗಳ ಸಾಮರ್ಥ್ಯವನ್ನು ಜಗತ್ತಿಗೆ ಸಾಬೀತುಪಡಿಸಿದ್ದು, ವಾಣಿಜ್ಯ ಬಾಹ್ಯಾಕಾಶ ಮಾರುಕಟ್ಟೆಯಲ್ಲಿ ದೇಶದ ಸ್ಥಾನವನ್ನು ಮತ್ತಷ್ಟು ಬಲಪಡಿಸಿದೆ. ಸುಮಾರು ೬ ಸಾವಿರದ ೧೦೦ ಕೆಜಿ ತೂಕದ ಈ ಸಂವಹನ ಉಪಗ್ರಹ, ಭಾರತದ ನೆಲದಿಂದ ಉಡಾವಣೆಯಾದ ಈವರೆಗಿನ ಅತಿ ಭಾರದ ಪೇಲೋಡ್ ಎಂಬ ಐತಿಹಾಸಿಕ ಮೈಲಿಗಲ್ಲನ್ನು

ನಿರ್ಮಿಸಿದೆ ಎಂದಿದ್ದಾರೆ. ಈ ಯಶಸ್ಸು 'ಆತ್ಮನಿರ್ಭರ ಭಾರತ' ಅಭಿಯಾನಕ್ಕೆ ಸಂದ ಜಯವಾಗಿದ್ದು, ಮುಂಬರುವ ಪೀಳಿಗೆಗೆ ಇದು ದೊಡ್ಡ ಪ್ರೇರಣೆಯಾಗಲಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಮ್ಮ ಸಂದೇಶದಲ್ಲಿ ಉಲ್ಲೇಖಿಸಿದ್ದಾರೆ.

<><><><>

ಪ್ರಧಾನಿ ನರೇಂದ್ರ ಮೋದಿ ಅವರು ಉತ್ತರ ಪ್ರದೇಶದ ಲಕ್ನೋದಲ್ಲಿ ನಾಳೆ ರಾಷ್ಟ್ರ ಪ್ರೇರಣಾ ಸ್ಥಳ ಉದ್ಘಾಟಿಸಲಿದ್ದು, ಮಾಜಿ ಪ್ರಧಾನಿ ಭಾರತ ರತ್ನ ಅಟಲ್ ಬಿಹಾರಿ ವಾಜಪೇಯಿ ಅವರ ಜೀವನ ಮತ್ತು ಆದರ್ಶಗಳಿಗೆ ಗೌರವ ಸಲ್ಲಿಸಲಿದ್ದಾರೆ. ಅಟಲ್ ಬಿಹಾರಿ ವಾಜಪೇಯಿ ಅವರ ೧೦೧ನೇ ಜನ್ಮ ದಿನಾಚರಣೆಯ ಸಂದರ್ಭದಲ್ಲಿ ಪ್ರಧಾನಿ ಲಕ್ನೋಗೆ ಭೇಟಿ ನೀಡುತ್ತಿದ್ದಾರೆ. ರಾಷ್ಟ್ರ ಪ್ರೇರಣಾ ಸ್ಥಳವನ್ನು ಒಂದು ಪ್ರಮುಖ ರಾಷ್ಟ್ರೀಯ ಸ್ಮಾರಕ ಮತ್ತು ಶಾಶ್ವತ ರಾಷ್ಟ್ರೀಯ ಮಹತ್ವದ ಸ್ಫೂರ್ತಿದಾಯಕ ಸಂಕೀರ್ಣವಾಗಿ ಅಭಿವೃದ್ಧಿಪಡಿಸಲಾಗಿದೆ. ಅಂದಾಜು ೨೩೦ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿತ ೬೫ ಎಕರೆ ವಿಸ್ತೀರ್ಣದ ವಿಸ್ತಾರವಾದ ಪ್ರದೇಶದಲ್ಲಿ ವ್ಯಾಪಿಸಿರುವ ಈ ಸಂಕೀರ್ಣವು ನಾಯಕತ್ವ ಮೌಲ್ಯಗಳು, ರಾಷ್ಟ್ರೀಯ ಸೇವೆ, ಸಾಂಸ್ಕೃತಿಕ ಪ್ರಜ್ಞೆ ಮತ್ತು ಸಾರ್ವಜನಿಕ ಸ್ಫೂರ್ತಿಯನ್ನು ಬೆಳೆಸಲು ಮೀಸಲಾಗಿರುವ ಶಾಶ್ವತ ರಾಷ್ಟ್ರೀಯ ಆಸ್ತಿಯಾಗಿ ಕಲ್ಪಿಸಲಾಗಿದೆ. ಈ ಸಂಕೀರ್ಣವು ಡಾ. ಶ್ಯಾಮ ಪ್ರಸಾದ್ ಮುಖರ್ಜಿ, ಪಂಡಿತ್ ದೀನದಯಾಳ್ ಉಪಾಧ್ಯಾಯ ಮತ್ತು ಅಟಲ್ ಬಿಹಾರಿ ವಾಜಪೇಯಿ ಅವರ ೬೫ ಅಡಿ ಎತ್ತರದ ಕಂಚಿನ ಪ್ರತಿಮೆಗಳನ್ನು ಹೊಂದಿದೆ, ಇದು ಭಾರತದ ರಾಜಕೀಯ ಚಿಂತನೆ, ರಾಷ್ಟ್ರ ನಿರ್ಮಾಣ ಮತ್ತು ಸಾರ್ವಜನಿಕ ಜೀವನಕ್ಕೆ ಅವರ ಪ್ರಮುಖ ಕೊಡುಗೆಗಳನ್ನು ಸಂಕೇತಿಸುತ್ತದೆ.

<><><><>

ವಿಕಸಿತ ಭಾರತ, ಜಿ ರಾಮ್ ಜಿ ಯೋಜನೆಯಡಿ ಕೇಂದ್ರದ ಕೊಡುಗೆಯನ್ನು ೮೬ ಸಾವಿರ ಕೋಟಿ ರೂಪಾಯಿಗಳಿಂದ ಸುಮಾರು ೯೫ ಸಾವಿರ ಕೋಟಿ ರೂಪಾಯಿಗಳಿಗೆ ಹೆಚ್ಚಿಸಲಾಗಿದೆ ಎಂದು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದ್ದಾರೆ. ದಿನಪತ್ರಿಕೆಯೊಂದಕ್ಕೆ ಬರೆದಿರುವ ಲೇಖನವೊಂದರಲ್ಲಿ ಸಚಿವರು, ಈ ಯೋಜನೆಯ ಪ್ರಯೋಜನಗಳನ್ನು ವಿವರಿಸಿದ್ದಾರೆ. ರಾಷ್ಟ್ರಪತಿಗಳು ವಿಕಸಿತ ಭಾರತ - ರೋಜ್‌ಗಾರ್ ಮತ್ತು ಆಜೀವಿಕಾ ಮಿಷನ್ (ಗ್ರಾಮೀಣ) ಕಾಯ್ದೆ, ೨೦೨೫ ಕ್ಕೆ ಅನುಮೋದನೆ ನೀಡಿದ್ದಾರೆ. ಇದು ಶಾಸನಬದ್ಧ ವೇತನ ಉದ್ಯೋಗ ಖಾತರಿಯನ್ನು ೧೨೫ ದಿನಗಳಿಗೆ ಹೆಚ್ಚಿಸಿದೆ. ಈ ಯೋಜನೆಯಡಿಯಲ್ಲಿ, ರಾಜ್ಯಗಳನ್ನು ಕೇವಲ ಅನುಷ್ಠಾನಗೊಳಿಸುವ ಸಂಸ್ಥೆಗಳಾಗಿ ಪರಿಗಣಿಸದೆ, ಅಭಿವೃದ್ಧಿಯಲ್ಲಿ ಪಾಲುದಾರರಾಗಿ, ಶಾಸನಬದ್ಧ ಚೌಕಟ್ಟಿನೊಳಗೆ ತಮ್ಮದೇ ಆದ ಯೋಜನೆಗಳನ್ನು ತಿಳಿಸಲು ಮತ್ತು ಕಾರ್ಯಗತಗೊಳಿಸಲು ಅಧಿಕಾರ ನೀಡಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

<><><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ಬರ್ಗಢದ ಧನು ಯಾತ್ರೆಯ ಪವಿತ್ರ ಸಂದರ್ಭದಲ್ಲಿ ದೇಶವಾಸಿಗಳಿಗೆ, ವಿಶೇಷವಾಗಿ ಒಡಿಶಾ ನಿವಾಸಿಗಳಿಗೆ ಶುಭಾಶಯಗಳನ್ನು ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ರಾಷ್ಟ್ರಪತಿ, ಭವ್ಯವಾದ ಬಯಲು ರಂಗಮಂದಿರದ ಅಪ್ರತಿಮ ಸಂಪ್ರದಾಯದಿಂದಾಗಿ ಈ ಉತ್ಸವ, ಭಾರತ ಮತ್ತು ವಿದೇಶಗಳಲ್ಲಿ ವಿಶಿಷ್ಟ ಗುರುತನ್ನು ಹೊಂದಿದೆ ಎಂದು ಹೇಳಿದರು. ಪೌರಾಣಿಕ ಕಥೆಗಳನ್ನು ಆಧರಿಸಿದ ಪ್ರದರ್ಶನಗಳು ಸಮಾಜದಲ್ಲಿ ಆಧ್ಯಾತ್ಮಿಕ ಪ್ರಜ್ಞೆ ಮತ್ತು ಸಾಂಸ್ಕೃತಿಕ ಹೆಮ್ಮೆಯನ್ನು ಬೆಳೆಸುತ್ತವೆ ಎಂದು ತಿಳಿಸಿದರು. ವಿಶ್ವಪ್ರಸಿದ್ಧ ಧನು ಜಾತ್ರೆ, ಒಡಿಶಾದ ಬರ್ಗಢದಲ್ಲಿ ೧೧ ದಿನಗಳ ಸಾಂಸ್ಕೃತಿಕ ಪ್ರದರ್ಶನದ ಆರಂಭವನ್ನು ಸೂಚಿಸುತ್ತದೆ. ವಿಶ್ವದ ಅತಿದೊಡ್ಡ ಬಯಲು ರಂಗಮಂದಿರವೆಂದು ಗುರುತಿಸಲ್ಪಟ್ಟ ಈ ಉತ್ಸವವು ಪುರಾಣ, ಸಂಪ್ರದಾಯ ಮತ್ತು ಪ್ರದರ್ಶನವನ್ನು ಒಂದು ಅನನ್ಯ ಆಚರಣೆಯಲ್ಲಿ ಒಟ್ಟುಗೂಡಿಸುತ್ತದೆ.

<><><><>

ದೆಹಲಿ ಮತ್ತು ರಾಷ್ಟ್ರೀಯ ರಾಜಧಾನಿ ಪ್ರದೇಶದಾದ್ಯಂತ ಇಂದು ದಟ್ಟವಾದ ಮಂಜು ಆವರಿಸಿದ ಪರಿಣಾಮ ಹಲವು ವಿಮಾನ ಮತ್ತು ರೈಲುಗಳ ಸೇವೆಗಳಿಗೆ ಅಡ್ಡಿ ಉಂಟಾಗಿದೆ. ದೆಹಲಿ ವಿಮಾನ ನಿಲ್ದಾಣದ ಅಧಿಕಾರಿಯೊಬ್ಬರು ಈ ಕುರಿತು ಮಾಹಿತಿ ನೀಡಿದ್ದು, ಇಂದಿರಾಗಾಂಧಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಕಡಿಮೆ ಗೋಚರತೆಯಿಂದಾಗಿ ಸುಮಾರು ೧೬ ವಿಮಾನಗಳನ್ನು ರದ್ದುಗೊಳಿಸಲಾಗಿದೆ ಎಂದು ತಿಳಿಸಿದ್ದಾರೆ. ಈ ನಡುವೆ, ದೆಹಲಿಗೆ ಹೋಗುವ ೫೦ ಕ್ಕೂ ಹೆಚ್ಚು ರೈಲುಗಳು ಆರು ಗಂಟೆಗಳ ಕಾಲ ವಿಳಂಬವಾಗಿವೆ ಎಂದು ಭಾರತೀಯ ರೈಲ್ವೆಯ ದೆಹಲಿ ವಿಭಾಗ ವರದಿ ಮಾಡಿದೆ.

<><><><>

ಟರ್ಕಿಯ ರಾಜಧಾನಿ ಅಂಕಾರಾ ಬಳಿ ನಡೆದ ವಿಮಾನ ಅಪಘಾತದಲ್ಲಿ ಲಿಬಿಯಾದ ಸೇನಾ ಮುಖ್ಯಸ್ಥ ಮೊಹಮ್ಮದ್ ಅಲಿ ಅಹ್ಮದ್ ಅಲ್-ಹದ್ದಾದ್ ಮತ್ತು ಇತರ ನಾಲ್ವರು ಮೃತಪಟ್ಟಿದ್ದಾರೆ. ಲಿಬಿಯಾದ ಪ್ರಧಾನಿ ಅಬ್ದುಲ್ ಹಮೀದ್ ದ್ಬೈಬಾ ದುರಂತಕ್ಕೆ ದುಃಖ ವ್ಯಕ್ತಪಡಿಸಿದ್ದಾರೆ. ನಿನ್ನೆ ಅಧಿಕಾರಿಗಳು ಟರ್ಕಿಗೆ ಭೇಟಿ ನೀಡಿ ಹಿಂತಿರುಗುತ್ತಿದ್ದಾಗ ಈ ಅಪಘಾತ ಸಂಭವಿಸಿದೆ ಎಂದು ಮಾಹಿತಿ ನೀಡಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>